ಸಂಯುಕ್ತ ಕರ್ನಾಟಕ
ಕನ್ನಡಿಗರ ಸಾಕ್ಷಿಪ್ರಜ್ಞೆ
ಶತಕದತ್ತ ಓಟ... ತೊಂಬತ್ತರ ನೋಟ

# ಹೊರನಾಡ ಕನ್ನಡಿಗರಿಂದ ಕನ್ನಡದ ಕಂಪು

**ದುಬೈ:** ಜಗತ್ತಿನಾದ್ಯಂತ ಕನ್ನಡಿಗರು ಆಯಾ ನಾಡಿನಲ್ಲಿ ಮನೆಮಾತಾಗುವ ಮೂಲಕ ಕನ್ನಡದ ಸಿರಿಯನ್ನು ಹೆಚ್ಚಿಸಿದ್ದಾರೆ. ಅದೇ ರೀತಿ ದುಬೈಯಲ್ಲಿಯೂ ಸಾಕಷ್ಟು ಕನ್ನಡಿಗರು ನೆಲೆಯೂರುವ ಮೂಲಕ ಕನ್ನಡದ ಕಂಪನ್ನು ಹರಡಿ ಕನ್ನಡಾಭಿಮಾನ ಮೆರೆದಿದ್ದಾರೆ ಎಂದು ಸಭಾಪತಿ ಬಸವರಾಜ ಹೊರಟ್ಟಿ ತಮ್ಮ ಮನದಾಳದ ಮಾತನ್ನು ಆಡಿದರು.

ಗಡಿನಾಡ ಸಾಹಿತ್ಯ ಸಾಂಸ್ಕೃತಿಕ ಅಕಾಡೆಮಿ ಯು.ಎ.ಇ. ಘಟಕದ ವತಿಯಿಂದ ವುಡ್‌ಲೆಮ್ ಪಾರ್ಕ್ ಶಾಲಾ ಆವರಣದಲ್ಲಿ ಆಯೋಜಿಸಿದ್ದ ದುಬೈ ಗಡಿನಾಡ ಉತ್ಸವ ಹಾಗೂ ಗಡಿನಾಡು ರತ್ನ ಪ್ರಶಸ್ತಿ ಪ್ರದಾನ ಸಮಾರಂಭದಲ್ಲಿ ಅವರು ಮಾತನಾಡಿದರು.

ಕನ್ನಡ ಭಾಷೆಗೆ ಸಾವಿರಾರು ವರ್ಷಗಳ ಇತಿಹಾಸವಿದೆ. ಕರ್ನಾಟಕದ ಸಂಸ್ಕೃತಿ ಇಡೀ ಜಗತ್ತಿಗೆ ಮಾದರಿಯಾಗಿರುವುದರಿಂದ ಎಲ್ಲರೂ ಕನ್ನಡಿಗರನ್ನು ಪ್ರೀತಿಸಿ ಗೌರವಿಸಿದ್ದನ್ನು ನಾನು ಕಂಡಿದ್ದೇನೆ. ನಾಲ್ಕು ದಶಕಗಳ ಸಾರ್ವಜನಿಕ ಜೀವನದಲ್ಲಿ 25ಕ್ಕೂ ಹೆಚ್ಚು ದೇಶಗಳಿಗೆ ಭೇಟಿ ನೀಡಿದ್ದೇನೆ. ಎಲ್ಲಿ ಹೋದರೂ ಕನ್ನಡಿಗರು ಸಿಕ್ಕೇ ಸಿಗುತ್ತಾರೆ. ಬೇರೆ ಬೇರೆ ದೇಶದಲ್ಲಿ ವಾಸಿಸಿದರೂ ಕನ್ನಡಾಭಿಮಾನವನ್ನು ಬಿಟ್ಟುಕೊಟ್ಟಿಲ್ಲ ಎಂದರು.

ದುಬೈಯಲ್ಲಿ ವಾಸಿಸುವ ಲಕ್ಷಾಂತರ ಕನ್ನಡಿಗರು ಕನ್ನಡಪರ ಸಂಘಟನೆಗಳನ್ನು ಕಟ್ಟಿಕೊಂಡು ಕನ್ನಡ ನಾಡಿನ ಸಂಸ್ಕೃತಿ, ಭಾಷೆ, ಆಹಾರ ಪದ್ಧತಿಗಳನ್ನು ತಾವಿರುವ ಪ್ರದೇಶವನ್ನು ಕನ್ನಡಮಯವಾಗಿ ಮಾಡಿದ್ದಾರೆ. ಪ್ರತಿವರ್ಷ ಗಡಿನಾಡು ಉತ್ಸವ ಮಾಡುವ ಮೂಲಕ ಕನ್ನಡದ ವಾತಾವರಣವನ್ನು ಹೆಚ್ಚೆಚ್ಚು ಈ ಪ್ರದೇಶದಲ್ಲಿ ಬಿತ್ತರಿಸಿ ಕರ್ನಾಟಕದ ಗೌರವ ಹೆಚ್ಚಿಸಿರುವ ಇಲ್ಲಿನ ಕನ್ನಡಿಗರಿಗೆ ಕರ್ನಾಟಕದ ಪರವಾಗಿ ವಿಶೇಷ ಅಭಿನಂದನೆ ಸಲ್ಲಿಸಿದರು.

ಗಡಿನಾಡ ಸಾಹಿತ್ಯ ಸಾಂಸ್ಕೃತಿಕ ಅಕಾಡೆಮಿ ಯು.ಎ.ಇ. ಘಟಕದ ಅಧ್ಯಕ್ಷ ನ್ಯಾ. ಬ್ರಾಹಿಂ ಖಲೀಲ ಅರಿಮಲೆ, ಪ್ರಧಾನ ಕಾರ್ಯದರ್ಶಿ ಅಮರದೀಪ ಕಲ್ಲೂರಾಯ್, ಕೋಶಾಧಿಕಾರಿ ಇಬ್ರಾಹಿಂ ಬಾಜೂರಿ, ಸಂಘಟಕರಾದ ಝುಡ್.ಎ. ಖೈಯಾರ, ವಿಜಯಕುಮಾರ ಶೆಟ್ಟಿ, ಗಾಣದಮೂಲೆ, ಮಜೀಬೈಲು, ಎ.ಆರ್.ಸುಬ್ಬಯ್ಯ ಕಟ್ಟೆ, ನವೀನಗೌಡ ಉಪಸ್ಥಿತರಿದ್ದರು.



ಗಡಿನಾಡ ಸಾಹಿತ್ಯ ಸಾಂಸ್ಕೃತಿಕ ಅಕಾಡೆಮಿ ಯು.ಎ.ಇ. ಘಟಕದ ವತಿಯಿಂದ ಆಯೋಜಿಸಿದ್ದ ದುಬೈ ಗಡಿನಾಡ ಉತ್ಸವ ಹಾಗೂ ಗಡಿನಾಡು ರತ್ನ ಪ್ರಶಸ್ತಿ ಪ್ರದಾನ ಸಮಾರಂಭದಲ್ಲಿ ಸಭಾಪತಿ ಬಸವರಾಜ ಹೊರಟ್ಟಿ ಭಾಗವಹಿಸಿದ್ದರು.

# ದುಬೈ ಕನ್ನಡಿಗರ ಕನ್ನಡಾಭಿಮಾನಕ್ಕೆ ಬೆಲೆಕಟ್ಟಲಾಗದು : ಹೊರಟ್ಟಿ.



ಗದಗ ಸಂಜೆ ವಾರ್ತೆ :

ದುಬೈ: ಜಗತ್ತಿನಾದ್ಯಂತ ಕನ್ನಡಿಗರು ಆಯಾ ನಾಡಿನಲ್ಲಿ ಮನೆಮಾತಾಗುವ ಮೂಲಕ ಕನ್ನಡದ ಸಿರಿಯನ್ನು ಹೆಚ್ಚಿಸಿದ್ದಾರೆ. ಅದೇ ರೀತಿ ದುಬೈಯಲ್ಲಿಯೂ ಸಾಕಷ್ಟು ಕನ್ನಡಿಗರು ನೆಲೆಯೂರುವ ಮೂಲಕ ಕನ್ನಡದ ಕಂಪನ್ನು ಹರಡಿ ಕನ್ನಡಾಭಿಮಾನ ಮೆರೆದಿದ್ದಾರೆ. ಹೀಗಾಗಿ ಅವರ ಪ್ರೀತಿಗೆ ಅಭಿಮಾನಕ್ಕೆ ಬೆಲೆಕಟ್ಟಲಾಗದು ಎಂದು ಸಭಾಪತಿ ಬಸವರಾಜ ಹೊರಟ್ಟಿ ತಮ್ಮ ಮನದಾಳದ ಮಾತನ್ನು ಆಡಿದರು.

ಅವರು ಗಡಿನಾಡ ಸಾಹಿತ್ಯ ಸಾಂಸ್ಕೃತಿಕ ಅಕಾಡೆಮಿ ಯು.ಎ.ಇ. ಘಟಕದ ವತಿಯಿಂದ ವುಡ್‌ಲೆಮ್ ಪಾರ್ಕ್ ಶಾಲಾ ಆವರಣದಲ್ಲಿ ಆಯೋಜಿಸಿದ್ದ ದುಬೈ ಗಡಿನಾಡ ಉತ್ಸವ ಕಾರ್ಯಕ್ರಮ ಹಾಗೂ ಗಡಿನಾಡು ರತ್ನ ಪ್ರಶಸ್ತಿ ಸಮಾರಂಭದಲ್ಲಿ ಮುಖ್ಯ ಅತಿಥಿಗಳಾಗಿ ಕಾರ್ಯಕ್ರಮ ಉದ್ಘಾಟಿಸಿ ಮಾತನಾಡಿದ ಅವರು ಕನ್ನಡ ಭಾಷೆಗೆ ಸಾವಿರಾರು ವರ್ಷಗಳ ಇತಿಹಾಸವಿದೆ. ಕರ್ನಾಟಕದ ಸಂಸ್ಕೃತಿ ಇಡೀ ಜಗತ್ತಿಗೆ ಮಾದರಿ ಯಾಗಿರುವುದರಿಂದ ಎಲ್ಲರೂ ಕನ್ನಡಗಿರನ್ನು ಪ್ರೀತಿಸಿ ಗೌರವಿಸಿದ್ದನ್ನು ನಾನು ಕಂಡಿದ್ದೇನೆ. ನನ್ನ ನಾಲ್ಕು ದಶಕಗಳ ಸಾರ್ವಜನಿಕ ಜೀವನದಲ್ಲಿ 25ಕ್ಕೂ ಹೆಚ್ಚು ದೇಶಗಳಿಗೆ ಭೇಟಿ ನೀಡಿದ್ದೇನೆ. ಎಲ್ಲಿ ಹೋದರೂ ಕನ್ನಡಿಗರು ಸಿಕ್ಕೇ ಸಿಗುತ್ತಾರೆ. ಬೇರೆ ಬೇರೆ ದೇಶದಲ್ಲಿ ವಾಸಿಸಿದರೂ ಕನ್ನಡಾಭಿಮಾನವನ್ನು ಬಿಟ್ಟುಕೊಟ್ಟಿಲ್ಲ ಇದು ಇಡೀ ಕನ್ನಡಿಗರಿಗೆಲ್ಲ ಹೆಮ್ಮೆ. ದುಬೈಯಲ್ಲಿ ವಾಸಿಸಿರುವ ಲಕ್ಷಾಂತರ ಕನ್ನಡಿಗರು ಕನ್ನಡಪರ ಸಂಘಟನೆಗಳನ್ನು ಕಟ್ಟಿಕೊಂಡು ಕನ್ನಡ ನಾಡಿನ ಸಂಸ್ಕೃತಿ, ಭಾಷೆ, ಆಹಾರ ಪದ್ಧತಿಗಳು ಹೀಗೆ ಎಲ್ಲವನ್ನೂ ಅಲ್ಲಿ ಬಿತ್ತರಿಸುವ ಮೂಲಕ ಕನ್ನಡಮಯವಾಗಿ ಮಾಡಿದ್ದು ನನಗಂತೂ ಸಾಕಷ್ಟು ಖುಷಿ ತಂದಿದೆ. ಪ್ರತಿ ವರ್ಷ ಗಡಿನಾಡು ಉತ್ಸವ ಮಾಡುವ ಮೂಲಕ ಕನ್ನಡದ ವಾತಾವರಣವನ್ನು ಹೆಚ್ಚೆಚ್ಚು ಈ ಪ್ರದೇಶದಲ್ಲಿ ಬಿತ್ತರಿಸಿ ಕರ್ನಾಟಕದ ಗೌರವ ಹೆಚ್ಚಿಸಿದ್ದ ಇಲ್ಲಿನ ಕನ್ನಡಿಗರಿಗೆ ಕರ್ನಾಟಕದ ಪರವಾಗಿ ವಿಶೇಷ ಅಭಿನಂದನೆಗಳನ್ನು ಸಲ್ಲಿಸುವುದಾಗಿ ಹೇಳಿದರು.

ಈ ಕಾರ್ಯಕ್ರಮದಲ್ಲಿ ಭಾಗವಹಿಸಿದ ನನಗೆ ಇಲ್ಲಿನ ಕನ್ನಡಿಗರ ಪ್ರೀತಿ ಮಾತೃ ವಾತ್ಸಲ್ಯದ ತೃಪ್ತಿ ನೀಡಿದೆ. ಕರ್ನಾಟಕದಲ್ಲಿಯೇ ಇದ್ದೇನೆ ಎಂಬ ಭಾವ ನನಗೆ ಮೂಡಿದೆ. ಈ ಗಡಿನಾಡು ಉತ್ಸವ ಮುಂಬರುವ ದಿನಗಳಲ್ಲಿ ಇನ್ನೂ ಹೆಚ್ಚೆಚ್ಚು ಉತ್ಕೃಷ್ಟ ಕಾರ್ಯಕ್ರಮಗಳನ್ನು ಮಾಡುವ ಮೂಲಕ ಒಂದು ಮಾದರಿ ಸಂಘಟನೆಯಾಗಿ ಬೆಳೆಯಲಿ ಇದಕ್ಕೆ ನನ್ನ ಎಲ್ಲ ಸಹಕಾರ ಇದೆ ಎಂದು ಬಸವರಾಜ ಹೊರಟ್ಟಿ ಹೇಳಿದರು.

ಈ ಸಂದರ್ಭದಲ್ಲಿ ಗಡಿನಾಡ ಸಾಹಿತ್ಯ ಸಾಂಸ್ಕೃತಿಕ ಅಕಾಡೆಮಿ ಯು.ಎ.ಇ. ಘಟಕದ ಅಧ್ಯಕ್ಷ ನ್ಯಾಯವಾದಿ ಇಬ್ರಾಹಿಂ ಖಲೀಲ ಅರಿಮಲೆ, ಪ್ರಧಾನ ಕಾರ್ಯದರ್ಶಿ ಅಮರದೀಪ ಕಲ್ಲೂರಾಯ್, ಕೋಶಾಧಿಕಾರಿ ಇಬ್ರಾಹಿಂ ಬಾಜೂರಿ, ಸಂಘಟಕರಾದ ಝುಡ್ ಎ. ಖೈಯಾರ, ವಿಜಯಕುಮಾರ ಶೆಟ್ಟಿ, ಗಾಣದಮೂಲೆ, ಮಜೀಬೈಲು, ಎ.ಆರ್.ಸುಬ್ಬಯ್ಯಕಟ್ಟೆ, ನವೀನಗೌಡ ಮುಂತಾದವರು ಉಪಸ್ಥಿತರಿದ್ದರು.



ದುಬೈ : ಗಡಿನಾಡ ಸಾಹಿತ್ಯ ಸಾಂಸ್ಕೃತಿಕ ಅಕಾಡೆಮಿ ಯು ಎ ಇ ಘಟಕದ ವತಿಯಿಂದ ನಡೆಯುವ ದುಬೈ ಗಡಿನಾಡ ಉತ್ಸವ ಕಾರ್ಯ ಕ್ರಮದಲ್ಲಿ ಭಾಗವಯಿಸಲು ದುಬೈಗೆ ಆಗಮಿಸಿದ ಕರ್ನಾಟಕ ವಿಧಾನ ಪರಿಷತ್ತಿನ ಮಾನ್ಯ ಸಭಾಪತಿಗಳಾದ ಬಸವರಾಜ ಎಸ್ ಹೊರಟ್ಟಿಯವರನ್ನು ದುಬೈ ವಿಮಾನ ನಿಲ್ದಾಣದಲ್ಲಿ ಅಕಾಡೆಮಿ ಅಧ್ಯಕ್ಷ ನ್ಯಾಯವಾದಿ ಇಬ್ರಾಹಿಂ ಖಲೀಲ್ ಅರಿಮಲೆ, ಪ್ರಧಾನ ಕಾರ್ಯದರ್ಶಿ ಅಮರದೀಪ ಕಲ್ಲೂರಾಯ, ಕೋಶಾಧಿಕಾರಿ ಇಬ್ರಾಹಿಂ ಬಾಜೂರಿ, ಸಂಘಟಕರಾದ ಝುಡ್ ಎ ಕಯ್ಯಾರ್, ವಿಜಯಕುಮಾರ ಶೆಟ್ಟಿ ಗಾಣದಮೂಲೆ ಮಜಿಬೈಲು, ಎ ಆರ್ ಸುಬ್ಬಯಕಟ್ಟೆ ಮುಂತಾದವರು ಸ್ವಾಗತಿಸಿದರು

# ಗಡಿನಾಡ ಉತ್ಸವಕ್ಕೆ ದುಬೈಗಾಗಮಿಸಿದ ಸಭಾಪತಿ ಹೊರಟ್ಟಿಗೆ ಸ್ವಾಗತ



ಗಡಿನಾಡ ಸಾಹಿತ್ಯ ಸಾಂಸ್ಕೃತಿಕ ಅಕಾಡೆಮಿ ಯು ಎ ಇ ಘಟಕದ ವತಿಯಿಂದ ನಡೆಯುವ ದುಬೈ ಗಡಿನಾಡ ಉತ್ಸವ ಕಾರ್ಯಕ್ರಮದಲ್ಲಿ ಭಾಗವಹಿಸಲು ದುಬೈಗೆ ಆಗಮಿಸಿದ ಕರ್ನಾಟಕ ವಿಧಾನ ಪರಿಷತ್ ಸಭಾಪತಿ ಬಸವರಾಜ ಎಸ್ ಹೊರಟ್ಟಿ ಅವರನ್ನು ದುಬೈ ವಿಮಾನ ನಿಲ್ದಾಣದಲ್ಲಿ ಅಕಾಡೆಮಿ ಅಧ್ಯಕ್ಷ ನ್ಯಾಯವಾದಿ ಇಬ್ರಾಹಿಂ ಖಲೀಲ್ ಅರಿಮಲೆ, ಪ್ರಧಾನ ಕಾರ್ಯದರ್ಶಿ ಅಮರದೀಪ ಕಲ್ಲೂರಾಯ, ಕೋಶಾಧಿಕಾರಿ ಇಬ್ರಾಹಿಂ ಬಾಜೂರಿ, ಸಂಘಟಕರಾದ ಝಿಡ್ ಎ ಕಯ್ಯಾರ್, ವಿಜಯಕುಮಾರ ಶೆಟ್ಟಿ ಗಾಣದಮೂಲೆ ಮಜಿಬೈಲು, ಎ ಆರ್ ಸುಬ್ಬಯಕಟ್ಟೆ ಮುಂತಾದವರು ಸ್ವಾಗತಿಸಿದರು.

# ದುಬೈ ಕನ್ನಡಿಗರ ಕನ್ನಡಾಭಿಮಾನಕ್ಕೆ ಬೆಲೆ ಕಟ್ಟಲಾಗದು: ಹೊರಟ್ಟಿ ಬಣ್ಣನೆ

**ದುಬೈ:** ಜಗತ್ತಿನಾದ್ಯಂತ ಕನ್ನಡಿಗರು ಆಯಾ ನಾಡಿನಲ್ಲಿ ಮನೆಮಾತಾಗುವ ಮೂಲಕ ಕನ್ನಡದ ಸಿರಿಯನ್ನು ಹೆಚ್ಚಿಸಿದ್ದಾರೆ. ಅದೇ ರೀತಿ ದುಬೈಯಲ್ಲಿಯೂ ಸಾಕಷ್ಟು ಕನ್ನಡಿಗರು ನೆಲೆಯೂರುವ ಮೂಲಕ ಕನ್ನಡದ ಕಂಪನ್ನು ಹರಡಿ ಕನ್ನಡಾಭಿಮಾನ ಮೆರೆದಿದ್ದಾರೆ. ಹೀಗಾಗಿ ಅವರ ಪ್ರೀತಿಗೆ ಅಭಿಮಾನಕ್ಕೆ ಬೆಲೆಕಟ್ಟಲಾಗದು ಎಂದು ಸಭಾಪತಿ ಬಸವರಾಜ ಹೊರಟ್ಟಿ ತಮ್ಮ ಮನದಾಳದ ಮಾತನ್ನು ಆಡಿದರು.



ಗಡಿನಾಡ ಸಾಹಿತ್ಯ ಸಾಂಸ್ಕೃತಿಕ ಅಕಾಡೆಮಿ ಯು.ಎ.ಇ. ಘಟಕದ ವತಿಯಿಂದ ವುಡ್‌ಲೆಮ್ ಪಾರ್ಕ ಶಾಲಾ ಆವರಣದಲ್ಲಿ ಆಯೋಜಿಸಿದ್ದ ದುಬೈ ಗಡಿನಾಡ ಉತ್ಸವ ಕಾರ್ಯಕ್ರಮ ಹಾಗೂ ಗಡಿನಾಡು ರತ್ನ ಪ್ರಶಸ್ತಿ ಸಮಾರಂಭದಲ್ಲಿ ಮುಖ್ಯ ಅತಿಥಿಗಳಾಗಿ ಕಾರ್ಯಕ್ರಮ ಉದ್ಘಾಟಿಸಿ ಮಾತನಾಡಿದ ಅವರು, ಕನ್ನಡ ಭಾಷೆಗೆ ಸಾವಿರಾರು ವರ್ಷಗಳ ಇತಿಹಾಸವಿದೆ. ಕರ್ನಾಟಕದ ಸಂಸ್ಕೃತಿ ಇಡೀ ಜಗತ್ತಿಗೆ ಮಾದರಿ ಯಾಗಿರುವುದರಿಂದ ಎಲ್ಲರೂ ಕನ್ನಡಗಿರನ್ನು ಪ್ರೀತಿಸಿ ಗೌರವಿಸಿದ್ದನ್ನು ನಾನು ಕಂಡಿದ್ದೇನೆ. ನನ್ನ ನಾಲ್ಕು ದಶಕಗಳ ಸಾರ್ವಜನಿಕ ಜೀವನದಲ್ಲಿ 25ಕ್ಕೂ ಹೆಚ್ಚು ದೇಶಗಳಿಗೆ ಭೇಟಿ ನೀಡಿದ್ದೇನೆ. ಎಲ್ಲಿ ಹೋದರೂ ಕನ್ನಡಿಗರು ಸಿಕ್ಕೇ ಸಿಗುತ್ತಾರೆ. ಬೇರೆ ಬೇರೆ ದೇಶದಲ್ಲಿ ವಾಸಿಸಿದರೂ ಕನ್ನಡಾಭಿಮಾನವನ್ನು ಬಿಟ್ಟುಕೊಟ್ಟಿಲ್ಲ ಇದು ಇಡೀ ಕನ್ನಡಿಗರಿಗೆಲ್ಲ ಹೆಮ್ಮೆ ಎಂದರು. ಈ ಕಾರ್ಯಕ್ರಮದಲ್ಲಿ ಭಾಗವಹಿಸಿದ ನನಗೆ ಇಲ್ಲಿನ ಕನ್ನಡಿಗರ ಪ್ರೀತಿ ಮಾತ್ರ ವಾತ್ಸಲ್ಯದ ತೃಪ್ತಿ ನೀಡಿದೆ. ಕರ್ನಾಟಕದಲ್ಲಿಯೇ ಇದ್ದೇನೆ ಎಂಬ ಭಾವ ನನಗೆ ಮೂಡಿದೆ. ಈ ಗಡಿನಾಡು ಉತ್ಸವ ಮುಂಬರುವ ದಿನಗಳಲ್ಲಿ ಇನ್ನೂ ಹೆಚ್ಚೆಚ್ಚು ಉತ್ಕೃಷ್ಟ ಕಾರ್ಯಕ್ರಮಗಳನ್ನು ಮಾಡುವ ಮೂಲಕ ಒಂದು ಮಾದರಿ ಸಂಘಟನೆಯಾಗಿ ಬೆಳೆಯಲಿ ಇದಕ್ಕೆ ನನ್ನ ಎಲ್ಲ ಸಹಕಾರ ಇದೆ ಎಂದು ಬಸವರಾಜ ಹೊರಟ್ಟಿ ಹೇಳಿದರು.

ಗಡಿನಾಡ ಸಾಹಿತ್ಯ ಸಾಂಸ್ಕೃತಿಕ ಅಕಾಡೆಮಿ ಯು.ಎ.ಇ. ಘಟಕದ ಅಧ್ಯಕ್ಷ ನ್ಯಾಯವಾದಿ ಇಬ್ರಾಹಿಂ ಖಲೀಲ ಅರಿಮಲೆ, ಪ್ರಧಾನ ಕಾರ್ಯದರ್ಶಿ ಅಮರದೀಪ ಕಲ್ಲೂರಾಯ್, ಕೋಶಾಧಿಕಾರಿ ಇಬ್ರಾಹಿಂ ಬಾಜೂರಿ, ಸಂಘಟಕರಾದ ಝುಡ್ ಎ. ಪ್ಯೈಯಾರ, ವಿಜಯಕುಮಾರ ಶೆಟ್ಟಿ, ಗಾಣದಮೂಲೆ, ಮಜೀಬೈಲು, ಎ.ಆರ್.ಸುಬ್ಬಯ್ಯಕಟ್ಟೆ, ನವೀನಗೌಡ ಮುಂತಾದವರು ಉಪಸ್ಥಿತರಿದ್ದರು.